DEPARTMENT / SUBJECT:

NAME OF THE NEWS PAPER: — DATE: 18/01/2020

# ಒತ್ತುವರಿ ಪತ್ತೆಗೆ ಬೋಪಯ್ಯ ಸಮಿತಿ

- ಎ.ಟಿ.ರಾಮಸ್ವಾಮಿ ಸಮಿತಿ ಪುನಾರಚನೆ
- ಹೊಸ ಸಮಿತಿಯಲ್ಲಿ ಎ.ಟಿ. ರಾಮಸ್ವಾಮಿ ಸದಸ್ಯ

ಬೆಂಗಳೂರು: ಸರ್ಕಾರಿ ಜಮೀನು ಒತ್ತುವರಿ ಪತ್ತೆ ಹಾಗೂ ತೆರವುಗೊಳಿಸಲು ಹಿಂದೆ ರಚಿಸಲಾಗಿದ್ದ ಎ.ಟಿ.ರಾಮಸ್ವಾಮಿ ಸಮಿತಿಯನ್ನು ಪುನರ್ ರಚಿಸಲಾಗಿದ್ದು ಸಮಿತಿಗೆ ಕೆ.ಜಿ.ಬೋಪಯ್ಯ ಅಧ್ಯಕ್ಷ ಆಗಲಿದ್ದಾರೆ.

ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಈ ಕುರಿತು ತೀರ್ಮಾನ ಕೈಗೊಂಡಿದ್ದು, ಸರ್ಕಾರಿ ಜಮೀನು ಸಂರಕ್ಷಣಾ ಸಮಿತಿ ರಚಿಸಿ ಕೆ.ಜಿ.ಬೋಪಯ್ಯ ಅಧ್ಯಕ್ಷತೆಯಲ್ಲಿ ಶಾಸಕರಾದ ಆರಗ ಜ್ಞಾನೇಂದ್ರ, ಎಸ್.ಆರ್. ವಿಶ್ವನಾಥ್, ಎ.ಟಿ.ರಾಮಸ್ವಾಮಿ, ರಾಜಶೇಖರ ಬಸವರಾಜ ಪಾಟೀಲ್, ನರಸಿಂಹ ನಾಯಕ್ ಅವರು ಸದಸ್ಯರಾಗಿದ್ದಾರೆ.

ಸಂಪುಟ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವ ಜೆ.ಸಿ.ಮಾಧುಸ್ವಾಮಿ, ಸರ್ಕಾರಿ ಜಮೀನುಗಳ ಒತ್ತುವರಿ ಪತ್ತೆ ಹಾಗೂ ಸಂರಕ್ಷಣೆಗಾಗಿ ಈ ಹಿಂದೆ ರಚಿಸಲಾಗಿದ್ದ ಎ.ಟಿ.ರಾಮಸ್ವಾಮಿ ಸಮಿತಿಯನ್ನು ಪುನರ್ ರಚಿಸಲಾಗಿದೆ. ಅಧಿಸೂಚನೆ ಹೊರಬಿದ್ದ ತಕ್ಷಣ ಸಮಿತಿ ತನ್ನ ಕಾರ್ಯ ಆರಂಭಿಸಬಹುದು. ಸಾರ್ವಜನಿಕರು ಸಮಿತಿಗೆ ದೂರು ಅಹವಾಲು ಸಲ್ಲಿಸಬಹುದಾಗಿದೆ ಎಂದು ತಿಳಿಸಿದರು.

**ಅವಧಿ ವಿಸ್ತರಣೆ:** ಅಕ್ರಮ ಗಣಿಗಾರಿಕೆ ತನಿಖೆಗಾಗಿ ಲೋಕಾಯುಕ್ತ ವ್ಯಾಪ್ತಿಯಲ್ಲಿ ರಚಿಸಲಾಗಿದ್ದ ವಿಶೇಷ ತನಿಖಾ ತಂಡದ ಅವಧಿಯನ್ನು ಮತ್ತೆ 1 ವರ್ಷ ಮುಂದುವರಿಸಲು ಸಂಪುಟ ತೀರ್ಮಾನಿಸಿದೆ ಎಂದು ಹೇಳಿದರು.

▶ 7ನೇ ಪುಟಕ್ಕೆ

## ಒತ್ತುವರಿ ಪತ್ತೆಗೆ ಬೋಪಯ್ಯ ಸಮಿತಿ

1ನೇ ಪುಟದಿಂದ ▶

ಬೆಂಗಳೂರು ಕೇಂದ್ರ ಕಾರಾಗೃಹ ಹಾಗೂ ವಿಜಯಪುರ ಕೇಂದ್ರ ಕಾರಾಗೃಹದಲ್ಲಿ ಅತ್ಯಾಧುನಿಕ ವಿಶಿಷ್ಟ ಸೆಲ್ ನಿರ್ಮಾಣಕ್ಕೆ ಸಂಪುಟ ತೀರ್ಮಾನಿಸಿದ್ದು, ತಲಾ 100 ಕೋಟಿ ರೂ. ಬಿಡುಗಡೆ ಮಾಡಲು ನಿರ್ಧರಿಸಲಾಗಿದೆ. ಈ ಎರಡೂ ಕಾರಾಗೃಹಗಳಲ್ಲಿ ಸಾಮರ್ಥ್ಯಕ್ಕಿಂತ ಹೆಚ್ಚು ಬಂಧಿಗಳಿದ್ದು ಉಗ್ರಗಾಮಿ, ನಕ್ಸಲ್ ಚಟುವಟಿಕೆ ತೊಡಗಿರುವವರು, ಕುಖ್ಯಾತ ರೌಡಿಗಳು, ಕ್ರಿಮಿನಲ್‌ಗಳನ್ನು ಸಾಮಾನ್ಯ ಸಜಾ ಬಂಧಿಗಳ ಜತೆ ಇರಿಸದೆ ಬೇರೆ ಕಡೆ ಇರಿಸಲು ಈ ವ್ಯವಸ್ಥೆ ಮಾಡಲಾಗುತ್ತಿದೆ ಎಂದು ಹೇಳಿದರು. ಬೆಂಗಳೂರಿನ ಪೀಣ್ಯ ಕೈಗಾರಿಕಾ ವಸಾಹತು ಹಾಗೂ ಹುಬ್ಬಳ್ಳಿಯ ಎಂ.ಟಿ.ಸಾಗರ್ ಕೈಗಾರಿಕಾ ವಸಾಹತುವಿನಲ್ಲಿ ಮೂಲಸೌಕರ್ಯ ಅಭಿವೃದ್ಧಿಗಾಗಿ ಕೆಎಸ್ಎಸ್ಐಡಿಸಿ ವತಿಯಿಂದ ಕ್ರಮವಾಗಿ 50 ಹಾಗೂ 18.50 ಕೋಟಿ ರೂ. ಬಿಡುಗಡೆ ಮಾಡಲು ಸಂಪುಟ ಒಪ್ಪಿಗೆ ನೀಡಿದೆ ಎಂದು ಹೇಳಿದರು.

## 3 ಸಾವಿರ ಪ್ರೋತ್ಸಾಹ ಧನ

ಆಶಾ ಕಾರ್ಯಕರ್ತೆಯರಿಗೆ ಒಂದಾವರ್ತಿ ಇಡುಗಂಟಾಗಿ ಮೂರು ಸಾವಿರ ರೂ. ಪ್ರೋತ್ಸಾಹ ಧನ ನೀಡಲು ರಾಜ್ಯ ಸರ್ಕಾರ ತೀರ್ಮಾನಿಸಿದೆ. ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದ್ದು, 41628 ಆಶಾ ಕಾರ್ಯಕರ್ತೆಯರಿಗೆ ಪ್ರೋತ್ಸಾಹ ಧನ ಸಿಗಲಿದೆ. 12.48 ಕೋಟಿ ರೂ. ಸರ್ಕಾರಕ್ಕೆ ಹೊರೆಯಾಗಲಿದೆ. ಇತ್ತೀಚೆಗೆ ಆಶಾ ಕಾರ್ಯಕರ್ತೆಯರು ಪ್ರತಿಭಟನೆ ನಡೆಸಿ ತಮ್ಮ ಬೇಡಿಕೆಗಳ ಈಡೇರಿಕೆಗೆ ಮನವಿ ಸಲ್ಲಿಸಿದ್ದರು. ಆ ಹಿನ್ನೆಲೆಯಲ್ಲಿ ಸರ್ಕಾರ ಒಂದು ಬಾರಿಗೆ ಮೂರು ಸಾವಿರ ರೂ. ಪ್ರೋತ್ಸಾಹ ಧನ ನೀಡಲು ತೀರ್ಮಾನಿಸಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ.ಮಾಧುಸ್ವಾಮಿ ತಿಳಿಸಿದರು.